# ಚಂಗಾವರ ಗ್ರಾಮ ಪಂಚಾಯ್ತಿ ಕಾರ್ಯಾಲಯ

## ಚಂಗಾವರ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ.

ದಿನಾಂಕ: 14-5-2020

ಕ್ರ.ಸಂ.

ಗೆ,

ಶ್ರೀ ಬಿ. ಎಸ್. ಯಡಿಯೂರಪ್ಪ
ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು

ವಿಷಯ: ಗ್ರಾಮ ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿಇರುವಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆಒತ್ತಾಯಿಸಿ ಪತ್ರ

ಇಡೀದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವಕೋವಿಡ್- 19ರ ಪರಿಣಾಮಕರ್ನಾಟಕದ ಮೇಲೂ ಆಗಿರುವುದರಿಂದರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ. ಕರ್ನಾಟಕದಲ್ಲಿ,ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದಗ್ರಾಮ ಪಂಚಾಯತ್‌ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19ರ ಸಂಕಷ್ಟದ ಸಮಯದಲ್ಲಿಚುನಾವಣೆಯಂತಹಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇ ಸರಿ. ಈ ಹಿನ್ನೆಲೆಯಲ್ಲಿರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್ಯಾವುದೋಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗಸೂಕ್ತವಾದುದಲ್ಲ.

ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದರಥದಎರಡು ಗಾಲಿಗಳಿದ್ದಂತೆ. ಸರ್ಕಾರದರಥ ಮುನ್ನಡೆಸುವಲ್ಲಿಇಬ್ಬರ ಪಾತ್ರವೂ ಬಹಳ ಪ್ರಮುಖವಾದುದು,ಗ್ರಾಮ ಪಂಚಾಯತ್‌ಒಂದು ಸ್ಥಳೀಯ ಸ್ವಯಂ ಸರ್ಕಾರ. ಹೀಗಾಗಿಯೇಇಡೀರಾಜ್ಯದಾದ್ಯಂತ ಕೋವಿಡ್-19ರ ಪರಿಸ್ಥಿತಿ ಘೋಷಣೆಯಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂಸೇವಾ ಸಂಸ್ಥೆಗಳ, ಸ್ವಯಂಸೇವಕರ ಸಂಯೋಜನೆಯಲ್ಲಿಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆಯಜವಾಬ್ದಾರಿಯ ನೇತೃತ್ವವನ್ನುಗ್ರಾಮ ಸರ್ಕಾರಕ್ಕೆ ನೀಡಿದ್ದು. ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದುಗ್ರಾಮ ಪಂಚಾಯತ್‌ಅಭಿವೃದ್ಧಿಯಲ್ಲಿನಮ್ಮ ಪಾತ್ರ-ಜವಾಬ್ದಾರಿಗಳ ಮಹತ್ವವನ್ನುಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿಗ್ರಾಮೀಣಜನರ ಅಗತ್ಯತೆಗಳೇನು. ಇಲ್ಲಿನ ಪರಿಸ್ಥಿತಿ ಹೇಗಿದೆ. ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದ್ದೇವೆ.

ಒಂದುರೀತಿಯಲ್ಲಿತುರ್ತು ಪರಿಸ್ಥಿತಿಯಂತೆಇರುವ ಈ ಸಮಯದಲ್ಲಿ ನಾವುಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ, ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿಉತ್ತರದಾಯಿಯಾಗಿಕಾರ್ಯನಿರ್ವಹಿಸಿರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದುದು. ತಮ್ಮ ಸರ್ಕಾರದ

ಈ ಆಡಳಿತಾಧಿಕಾರಿ, ಸರ್ಕಾರವನ್ನುತಕ್ಷಣವೇಕೈಬಿಟ್ಟು, ಪ್ರಸ್ತುತಇರುವಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ [illegible] ಸರ್ಕಾರವನ್ನೇಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್‌ನಜನರಿಂದಜನರಿಂದಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿನಮ್ಮಗ್ರಾಮದಜನರಿಗೆ, ಗ್ರಾಮದಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಇಂತಿ,

ಗ್ರಾಮ ಪಂಚಾಯತ್‌ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು
ಚಂಗಾವರ ಗ್ರಾಮ ಪಂಚಾಯತ್, ಶಿರಾ ತಾಲೂಕು, ತುಮಕೂರು ಜಿಲ್ಲೆ.

ಯಥಾ ಪ್ರತಿ:

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯಆಂದೋಲನ, ಕರ್ನಾಟಕ

::ಚಂಗಾವರ ಗ್ರಾಮ ಪಂಚಾಯತ್, ಶಿರಾ ತಾಲೂಕು, ತುಮಕೂರು ಜಿಲ್ಲೆ::

| ಕ್ರ.ಸಂ. | ಹೆಸರು | ಪದನಾಮ | ಸಹಿ |
|---|---|---|---|
| 1. | ಪುಟ್ಟರಂಗಮ್ಮ | ಅಧ್ಯಕ್ಷರು | ಪುಟ್ಟರಂಗಮ್ಮ |
| 2. | ವನಜಾಕ್ಷಮ್ಮ ಪಿ | ಉಪಾಧ್ಯಕ್ಷರು | ಪಿ ವನಜಾಕ್ಷಮ್ಮ |
| 3. | ಗೌರಮ್ಮ | ಸದಸ್ಯರು | ಗೌರಮ್ಮ |
| 4. | ದೊಡ್ಡಣ್ಣ | ಸದಸ್ಯರು | |
| 5. | ತಿಪ್ಪೇಸ್ವಾಮಿ | ಸದಸ್ಯರು | |
| 6. | ತಿಮ್ಮಣ್ಣ | ಸದಸ್ಯರು | ತಿ ಮ್ಮಣ್ಣ |
| 7. | ಜ್ಯೋತಿ ಆರ್ | ಸದಸ್ಯರು | |
| 8. | ಗೋವಿಂದಪ್ಪ | ಸದಸ್ಯರು | ಗೋವಿಂದಪ್ಪ |
| 9. | ಲಕ್ಕಮ್ಮ | ಸದಸ್ಯರು | ಲಕ್ಕಮ್ಮ |
| 10. | ಕೋಡಿಹನುಮಂತಪ್ಪ | ಸದಸ್ಯರು | ಕೋಡಿಹನುಮಂತಪ್ಪ |
| 11. | ಧನಲಕ್ಷ್ಮೀ | ಸದಸ್ಯರು | ಧನಲಕ್ಷ್ಮೀ |
| 12. | ಚಂದ್ರಮ್ಮ | ಸದಸ್ಯರು | Chandramma. B. |
| 13. | ಚಂದ್ರಪ್ಪ | ಸದಸ್ಯರು | ಚಂದ್ರಪ್ಪ |